ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 02 ಸಿಡಿಸಿ (2) 2018-19 1594

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:30-08-2018.

**-:ಸುತ್ತೋಲೆ:-**

ವಿಷಯ: ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಯ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಉನ್ನತ ವ್ಯಾಸಂಗದ ಸಂದರ್ಶನ/ದಾಖಲಾತಿ ಪರಿಶೀಲನೆಯ ಪ್ರಕ್ರಿಯೆಗಾಗಿ KEAಗೆ ಹಾಜರಾಗಲು ಪ್ರಾಚಾರ್ಯರ ಹಂತದಲ್ಲಿ ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಸಮ ಸಂಖ್ಯೆ ಪತ್ರಗಳಲ್ಲಿ ಉನ್ನತ ವ್ಯಾಸಂಗಕ್ಕಾಗಿ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ನೀಡಿರುವ ನಿರಾಕ್ಷೇಪಣಾ ಪತ್ರಗಳು.
2. ಈ ಕಛೇರಿ ಸುತ್ತೋಲೆ ಸಂಖ್ಯೆ; ಡಿಟಿಇ 16 ಸಿಡಿಸಿ(2) 2018-19, ದಿನಾಂಕ:24-07-2018.

*****

ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ವಿಟಿಯು/ಇತರೆ ವಿಶ್ವವಿದ್ಯಾಲಯಗಳು/ಇತರೆ ವಿದ್ಯಾಸಂಸ್ಥೆಗಳಲ್ಲಿ ಪೂರ್ಣಕಾಲಿಕ/ಅರೆಕಾಲಿಕ ನೆಲೆಯಲ್ಲಿ ಕ್ಯೂಐಪಿ ಯೋಜನೆಯಡಿಯಲ್ಲಿ ಪಿಹೆಚ್.ಡಿ., ಎಂ.ಇ., ಎಂ.ಟೆಕ್., ಎಂ.ಫಿಲ್., ಎಂ.ಎಸ್ಸಿ(ಇಂ.)., ಬಿ.ಇ(Lateral entry) ಉನ್ನತ ವ್ಯಾಸಂಗಕ್ಕಾಗಿ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ಇಲಾಖೆಯಿಂದ ನೀಡಿದ ಉಲ್ಲೇಖ(1)ರ ನಿರಾಕ್ಷೇಪಣಾ ಪತ್ರಗಳಲ್ಲಿ ಉನ್ನತ ವ್ಯಾಸಂಗದ ಸಲುವಾಗಿ ಸಂದರ್ಶನ/ದಾಖಲಾತಿ ಪರಿಶೀಲನೆಯ ಪ್ರಕ್ರಿಯೆಗಾಗಿ KEAಗೆ ಹಾಜರಾಗಲು ದೃಢಿಕೃತ ದಾಖಲೆಗಳೊಂದಿಗೆ ಸಂಸ್ಥೆಯ ಪ್ರಾಚಾರ್ಯರು ಪ್ರಸ್ತಾವನೆಗಳನ್ನು ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿತ್ತು.

ತತ್ಸಂಬಂಧ, ಉಲ್ಲೇಖ(1)ರನ್ವಯ ನಿರಾಕ್ಷೇಪಣಾ ಪತ್ರವನ್ನು ಪಡೆದುಕೊಂಡಿರುವ ಸಿಬ್ಬಂದಿ ವರ್ಗದವರಿಗೆ ಉನ್ನತ ವ್ಯಾಸಂಗಕ್ಕಾಗಿ ದಾಖಲಾತಿ ಪರಿಶೀಲನೆಯ ಪ್ರಕ್ರಿಯೆಗಾಗಿ KEAಗೆ ಹಾಜರಾಗಲು ನಿರಾಕ್ಷೇಪಣಾ ಪತ್ರ ನೀಡುವ ಸಂಬಂಧ, ವಿಭಾಗದ ಸಿಬ್ಬಂದಿ ವರ್ಗದವರ ಜೇಷ್ಠತೆಯ ಆಧಾರದ ಮೇರೆಗೆ, ವಿಭಾಗದಲ್ಲಿ ಮಂಜೂರಾದ ಹುದ್ದೆಗಳ ಪೈಕಿ, ಕಾರ್ಯ ನಿರ್ವಹಿಸಲು ಶೇಕಡ 50% ರಷ್ಟು ಕನಿಷ್ಠ ಸಿಬ್ಬಂದಿ ಲಭ್ಯವಿರುವುದನ್ನು ಖಚಿತ ಪಡಿಸಿಕೊಂಡು, ಸದರಿ ಸಿಬ್ಬಂದಿ ವರ್ಗದವರ ಉನ್ನತ ವ್ಯಾಸಂಗದ ನಿಯೋಜನೆಯಿಂದ ಸಂಸ್ಥೆಯ ವಿಭಾಗದ ದೈನಂದಿನ ಮತ್ತು ಶೈಕ್ಷಣಿಕ ಕೆಲಸ ಕಾರ್ಯಗಳಿಗೆ ಯಾವುದೇ ತೊಂದರೆಯಾಗುವುದಿಲ್ಲವೆಂದು ಸಂಬಂಧಪಟ್ಟ ಪ್ರಾಚಾರ್ಯರು ದೃಢಿಕರಿಸಿ, ದಾಖಲಾತಿ ಪರಿಶೀಲನೆಯ ಪ್ರಕ್ರಿಯೆಗಾಗಿ KEAಗೆ ಹಾಜರಾಗಲು ಪ್ರಾಚಾರ್ಯರ ಹಂತದಲ್ಲಿಯೇ ಅನುಮತಿ ನೀಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, ಉಲ್ಲೇಖ(2)ರ ಸುತ್ತೋಲೆಯಲ್ಲಿ ತಿಳಿಸಿರುವಂತೆ, ಉನ್ನತ ವ್ಯಾಸಂಗಕ್ಕೆ ಆಯ್ಕೆಗೊಂಡ ಸಿಬ್ಬಂದಿ ವರ್ಗದವರ ಮನವಿಗಳನ್ನು ಕೂಲಂಕುಶವಾಗಿ ಪರಿಶೀಲಿಸಿ, ದೃಢೀಕೃತ ದಾಖಲೆಗಳೊಂದಿಗೆ ಕಡ್ಡಾಯವಾಗಿ ಸೂಕ್ತ ಶಿಫಾರಸ್ಸಿನೊಂದಿಗೆ ಪ್ರಾಚಾರ್ಯರು ಉನ್ನತ ವ್ಯಾಸಂಗದ ನಿಯೋಜನೆಯ ಪ್ರಸ್ತಾವನೆಗಳನ್ನು ದ್ವಿ ಪ್ರತಿಗಳಲ್ಲಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ಆದಾಗ್ಯೂ, ನಿಯಮ ಹಾಗೂ ಷರತ್ತುಗಳನ್ನು ಉಲ್ಲಂಘಿಸಿ ದಾಖಲೆಗಳ ಪರಿಶೀಲನೆ ಪ್ರಕ್ರಿಯೆಗಾಗಿ KEAಗೆ ಹಾಜರಾಗಲು ಸಿಬ್ಬಂದಿ ವರ್ಗದವರಿಗೆ ಅನುಮತಿ ನೀಡಿದ್ದಲ್ಲಿ ಹಾಗೂ ಉನ್ನತ ವ್ಯಾಸಂಗದ ನಿಯೋಜನೆಯ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸಿದ್ದಲ್ಲಿ, ಮುಂದಿನ ಆಗುಹೋಗುಗಳಿಗೆ ಸಂಬಂಧಪಟ್ಟ ಪ್ರಾಚಾರ್ಯರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

ನಿರ್ದೇಶಕರು

ಇವರಿಗೆ: 1. ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜು ಪ್ರಾಚಾರ್ಯರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ, ತಾಂ.ಶಿ.ನಿ ಬೆಂಗಳೂರು, ಇವರಿಗೆ ಡಿಟಿಇ ವೆಬ್ ಸೈಟ್‌ನಲ್ಲಿ ಪ್ರಚುರ ಪಡಿಸಲು ಮುಂದಿನ ಕ್ರಮಕ್ಕಾಗಿ.